**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ .5493/2021**

| | | | |
|---|---|---|---|
| **ಸಾಕ್ಷಿದಾರರ ಹೆಸರು** | - ದೇವರಾಜು | | **ಚಾ.ಸಾ.-7** |
| **ತಂದೆಯ ಹೆಸರು** | - ಪಾಪಶೆಟ್ಟಿ | | **ಪ್ರಾ.ಸಾ.-3** |
| **ವಯಸ್ಸು** | - 53 ವರ್ಷ | | |
| **ಉದ್ಯೋಗ** | - ವ್ಯವಸಾಯ | | |
| **ವಾಸಸ್ಥಳ** | - ಬೋರಾಪುರ | | |

ದಿನಾಂಕಃ 26-11-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ, ಸದರೀ ದಾಖಲೆ ಅಮಾನತ್ತು ಮಹಜರ್ ಆಗಿದ್ದು, ಅದನ್ನು ನಿ.ಪಿ. 2 ಎಂದು ಈಗಾಗಲೇ ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ. 2 ಬಿ ಎಂದು ಗುರುತಿಸಲಾಯಿತು. ಸದರೀ ದಾಖಲೆಗೆ ಸುಮಾರು 7-8 ವರ್ಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನಿ.ಪಿ. 2 ರಲ್ಲಿ ಪೋಲೀಸರು ಏನು ಬರೆದಿದ್ದಾರೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ನಿ.ಪಿ. 2 ದಾಖಲೆಗೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದ್ದಾರೆಂದು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ದಾಖಲಾತಿಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಮಹಜರ್ ಕ್ರಮ ಜರುಗಿಸಿಲ್ಲ.

**( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸದರಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿ ನೀಡಲಾಯಿತು. )**

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ರವರಿಂದ**

ದಿನಾಂಕಃ 22-02-2018 ರಂದು ಮದ್ದೂರು ತಾಲ್ಲೂಕು ಕಚೇರಿಯಲ್ಲಿನ ಮೊದಲನೇ ಮಹಡಿಯಲ್ಲಿರುವ ರೆಕಾರ್ಡ್ ರೂಂ ನಲ್ಲಿ ಸಂಜೆ 04-30 ರಿಂದ 05-30

ಗಂಟೆಯವರೆಗೆ ನಿಮ್ಮ ಮತ್ತು ಚಾ.ಸಾ. 6 ಮತ್ತು 8 ರವರ ಸಮಕ್ಷಮ ನಿ.ಪಿ. 2 ರಂತೆ ಮಹಜರ್ ಕ್ರಮ ಜರುಗಿಸಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಾಖಲಾತಿಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ನಿ.ಪಿ. 2 ರಲ್ಲಿರುವ ಎಲ್ಲಾ ವಿಚಾರಗಳು ನಿಮಗೆ ಗೊತ್ತಿದ್ದರೂ, ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ವಕೀಲರಿಂದ ಏನೂ ಇಲ್ಲ.**

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್ ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ , ಮದ್ದೂರು.